# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಮಾನ್ಯ ವಿಧಾನ ಪರಿಷತ್ತಿನ ಸದಸ್ಯರ ಹೆಸರು: | ಶ್ರೀ ಕೆ.ಟಿ. ಶ್ರೀಕಂಠೇಗೌಡ |
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: | 794 |
| ಉತ್ತರಿಸ ಬೇಕಾದ ದಿನಾಂಕ: | 11.03.2020 |
| ಉತ್ತರಿಸುವ ಸಚಿವರು | ವಿ. ಸೋಮಣ್ಣ, ವಸತಿ ಸಚಿವರು |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ಕಳೆದ 3 ವರ್ಷಗಳಿಂದ ವಿವಿಧ ವಸತಿ ಯೋಜನೆಗಳಲ್ಲಿ ಆಯ್ಕೆಯಾದ ಗ್ರಾಮೀಣ ಭಾಗದ ಫಲಾನುಭವಿಗಳ ಸಂಖ್ಯೆ ಎಷ್ಟು; | 2016-17 ರಿಂದ ಇಲ್ಲಿಯವರೆಗೆ ಗ್ರಾಮೀಣ ಪ್ರದೇಶದಲ್ಲಿ ವಿವಿಧ ವಸತಿ ಯೋಜನೆಗಳಲ್ಲಿ ಒಟ್ಟು 1063954 ಫಲಾನುಭವಿಗಳನ್ನು ಆಯ್ಕೆ ಮಾಡಿ ಕಾಮಗಾರಿ ಆದೇಶ ನೀಡಲಾಗಿದೆ. ಈ ಪೈಕಿ ಒಟ್ಟು 491909 ಮನೆಗಳು ಪೂರ್ಣಗೊಂಡಿದ್ದು, 572045 ಮನೆಗಳು ಪೂರ್ಣಗೊಳ್ಳಲು ಬಾಕಿ ಇರುತ್ತವೆ. |
| (ಆ) | ಸದರಿ ಯೋಜನೆ ಅನ್ವಯ ಪೂರ್ಣಗೊಂಡ ಮನೆಗಳೆಷ್ಟು; ಅಪೂರ್ಣಗೊಂಡ ಮನೆಗಳೆಷ್ಟು; | |
| ಇ) | ವಸತಿ ಯೋಜನೆಯ ಫಲಾನುಭವಿಗಳಿಗೆ ಕಳೆದ ನಾಲ್ಕು-ಐದು ತಿಂಗಳುಗಳಿಂದ ಅನುದಾನ ಬಿಡುಗಡೆಯಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಹೌದು. ವಸತಿ ಯೋಜನೆಗಳಡಿ ಫಲಾನುಭವಿಗಳು ನಿರ್ಮಿಸಿಕೊಂಡಿರುವ ಮನೆಗಳನ್ನು ನಿಗಮವು ಅಭಿವೃದ್ಧಿ ಪಡಿಸಿರುವ "ಇಂದಿರಾ ಮನೆ" ಆ್ಯಪ್ ಮೂಲಕ ಜಿ.ಪಿ.ಎಸ್ ಆಧಾರಿತ ಛಾಯಚಿತ್ರಗಳನ್ನು ಪಂಚಾಯತಿ ಅಭಿವೃದ್ಧಿ ಅಧಿಕಾರಿ/ನಗರ ಸ್ಥಳೀಯ ಸಂಸ್ಥೆಗಳ ಅಧಿಕಾರಿಗಳು ಫಲಾನುಭವಿಯಿಂದ ಪಡೆದು ಪಂಚಾಯತಿ ಅಭಿವೃದ್ಧಿ ಅಧಿಕಾರಿ/ನಗರ ಸ್ಥಳೀಯ ಸಂಸ್ಥೆಗಳ ಅಧಿಕಾರಿಗಳ ದೃಢೀಕರಣದ ಆಧಾರದ ಮೇಲೆ ಫಲಾನುಭವಿಗಳ ಆಧಾರ್ ಆಧಾರಿತ ಬ್ಯಾಂಕ್ ಖಾತೆಗೆ ಅನುದಾನವನ್ನು ನೇರವಾಗಿ ಬಿಡುಗಡೆಗೊಳಿಸಲಾಗುತ್ತಿತ್ತು. |
| ಈ) | ಬಂದಿದ್ದಲ್ಲಿ, ಶೀಘ್ರ ಅನುದಾನ ಬಿಡುಗಡೆಗೆ ಸರ್ಕಾರ ಕೈಗೊಂಡ ಕ್ರಮಗಳೇನು? | ಈ ನಡುವೆ ರಾಜ್ಯದ ವಿವಿಧ ಕಡೆಗಳಲ್ಲಿ ವಸತಿ ಯೋಜನೆಗಳಡಿ ಅವ್ಯವಹಾರ ನಡೆದಿರುವುದಾಗಿ ಬಂದಂತಹ ದೂರಿನ ಹಿನ್ನೆಲೆಯಲ್ಲಿ ಪರಿಶೀಲನೆ ಪ್ರಕ್ರಿಯೆ ನಡೆಯುತ್ತಿದ್ದು, ಕಳೆದ ಆಗಸ್ಟ್-2019ರಿಂದ ಅನುದಾನ ದುರ್ಬಳಕೆಯನ್ನು ತಡೆಹಿಡಿಯುವ ಉದ್ದೇಶದಿಂದ ದಿನಾಂಕ: 16.11.2019 ರ ಸರ್ಕಾರಿ ಆದೇಶದ ರೀತ್ಯಾ ಪ್ರಗತಿಯಲ್ಲಿರುವ ಹಾಗೂ ಅನುದಾನ ಬಿಡುಗಡೆಗೆ ಬೇಡಿಕೆ ಇರುವ ಮನೆಗಳನ್ನು Geo ಆಧಾರಿತ Vigil App ಮೂಲಕ ಪರಿಶೀಲಿಸಲು ಗ್ರಾಮೀಣ ಪ್ರದೇಶದಲ್ಲಿ ಜಿಲ್ಲಾಪಂಚಾಯತಿ ಮುಖ್ಯಕಾರ್ಯನಿರ್ವಹಣಾಧಿಕಾರಿಯವರ ಅಧ್ಯಕ್ಷತೆಯಲ್ಲಿ ಹಾಗೂ ನಗರ ಪ್ರದೇಶದಲ್ಲಿ ಜಿಲ್ಲಾಧಿಕಾರಿಯವರ ಅಧ್ಯಕ್ಷತೆಯಲ್ಲಿ ಪರಿಶೀಲನಾ ಸಮಿತಿ ರಚಿಸಲಾಗಿರುತ್ತದೆ. |

| | | |
|---|---|---|
| | | ಅದರಂತೆ ಸದರಿ ಸಮಿತಿಯು 2.23 ಲಕ್ಷ ಮನೆಗಳ ಪೈಕಿ 60401 ಮನೆಗಳನ್ನು Vigil App ಮೂಲಕ ಜಿ.ಪಿ.ಎಸ್ ಗೆ ಅಳವಡಿಸಲಾಗಿದ್ದು, ಅದರಲ್ಲಿ ಜಿಲ್ಲಾ ಪಂಚಾಯ್ತಿಯ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಹಾಗೂ ಜಿಲ್ಲಾಧಿಕಾರಿಯವರು ಅರ್ಹವೆಂದು ಶಿಫಾರಸ್ಸು ಮಾಡಿದ 39733 ಮನೆಗಳ ಪೈಕಿ "ವಿಜಿಲ್ ಆ್ಯಪ್" ಮೂಲಕ ಪರಿಶೀಲಿಸಿ ಅರ್ಹಗೊಂಡ ಒಟ್ಟಾರೆ 39733 ಮನೆಗಳ ಫಲಾನುಭವಿಗಳಿಗೆ ಇಲ್ಲಿಯವರೆಗೆ ಒಟ್ಟು ರೂ.185.72 ಕೋಟಿಗಳನ್ನು ಫಲಾನುಭವಿಗಳ ಖಾತೆಗೆ ಬಿಡುಗಡೆ ಮಾಡಲಾಗಿದೆ. 3356 ಮನೆಗಳು ಅನರ್ಹವಾಗಿರುವುದು ಕಂಡು ಬಂದಿರುತ್ತದೆ. ಇನ್ನುಳಿದ ಫಲಾನುಭವಿಗಳ ಪರಿಶೀಲನಾ ಕಾರ್ಯ ಪ್ರಗತಿಯಲ್ಲಿದ್ದು, ಪ್ರಗತಿಗೆ ಅನುಗುಣವಾಗಿ ತ್ವರಿತವಾಗಿ ಅನುದಾನ ಬಿಡುಗಡೆಗೆ ಎಲ್ಲಾ ರೀತಿಯ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ. |

ವ ಇ 85 ಹೆಚ್ಎಂ 2020

(ವಿ.ಸೋಮಣ್ಣ)
ವಸತಿ ಸಚಿವರು